# ಪತ್ರಿಕಾ ಪ್ರಕಟಣೆ

ದಿನಾಂಕ 08.05.2020 ರ ಪತ್ರಿಕಾ ಪ್ರಕಟಣೆಯ ಮುಂದುವರೆದ ಭಾಗ:-

ಕೋವಿಡ್-19ರ ಸಂಬಂಧ ರಾಜ್ಯಾದಂತ ಲಾಕ್‌ಡೌನ್ ಘೋಷಿಸಿದ್ದರಿಂದ ಸಾರ್ವಜನಿಕರಿಗೆ ನಷ್ಟವಾಗಿರುವುದನ್ನು ಗಮನಿಸಿ ಸರ್ಕಾರದ ವತಿಯಿಂದ ಹಲವು ವರ್ಗದವರಿಗೆ ಪರಿಹಾರ ಧನವನ್ನು ಘೋಷಿಸಿರುತ್ತಾರೆ. ಅದರಲ್ಲಿ ಸಾರಿಗೆ ಇಲಾಖೆಗೆ ಸಂಬಂಧಿಸಿದಂತೆ ಆಟೋ ರಿಕ್ಷಾ/ಟ್ಯಾಕ್ಸಿ ಚಾಲಕರಿಗೆ ಪರಿಹಾರ ಧನವನ್ನಾಗಿ ರೂ. 5000/- ಗಳನ್ನು ನೀಡಲು ಸನ್ಮಾನ್ಯ ಮುಖ್ಯ ಮಂತ್ರಿಯವರು ದಿನಾಂಕ 06.05.2020 ರ ಪತ್ರಿಕಾ ಪ್ರಕಟಣೆಯಲ್ಲಿ ಘೋಷಿಸಿರುತ್ತಾರೆ.

ಸರ್ಕಾರದಿಂದ ಘೋಷಿಸಿರುವ ಪರಿಹಾರ ಧನ ರೂ. 5,000/- ಗಳನ್ನು ಪಡೆಯುವ ಫಲಾನುಭವಿಗಳಾದ ಆಟೋ ರಿಕ್ಷಾ/ಟ್ಯಾಕ್ಸಿ ಚಾಲಕರು ಈ ಕೆಳಕಂಡ ನಿಬಂಧನೆಗಳನ್ನು ಪೂರ್ಣಗೊಳಿಸಿ ಪರಿಹಾರ ಧನ ಪಡೆಯಬಹುದು.

1. ಆಟೋ ರಿಕ್ಷಾ/ಟ್ಯಾಕ್ಸಿ ಚಾಲನೆ ಮಾಡಲು ಚಾಲನಾ ಅನುಜ್ಞಾ ಪತ್ರ ಮತ್ತು ಬ್ಯಾಡ್ಜ್ ಹೊಂದಿರುವವರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರು.
2. ಫಲಾನುಭವಿಗಳು ಆಟೋ ರಿಕ್ಷಾ/ಟ್ಯಾಕ್ಸಿ ಚಾಲಕರಾಗಿದ್ದು, ದಿನಾಂಕ 01.03.2020 ಕ್ಕೆ ಚಾಲ್ತಿಯಲ್ಲಿರುವ ಚಾಲನಾ ಅನುಜ್ಞಾ ಪತ್ರದ ವಿವರಗಳನ್ನು ಸೇವಾ ಸಿಂಧೂ ಪೋರ್ಟಲ್‌ನಲ್ಲಿ ನಮೂದಿಸಬೇಕು.

3. ಆಟೋ ರಿಕ್ಷಾ/ಟ್ಯಾಕ್ಸಿ ಚಾಲಕರ ಆಧಾರ್ ಕಾರ್ಡ್ ವಿವರಗಳನ್ನು ಸೇವಾ ಸಿಂಧೂ ಪೋರ್ಟಲ್‌ನಲ್ಲಿ ನಮೂದಿಸಬೇಕು.
4. ಚಾಲಕರ ಬ್ಯಾಂಕ್ ಖಾತೆ (ಅಕೌಂಟ್ಸ್) ವಿವರ IFSC ಕೋಡ್, MICR ಕೋಡ್ ತಪ್ಪದೇ ಪೋರ್ಟಲ್‌ನಲ್ಲಿ ನಮೂದಿಸಬೇಕು.
5. ಚಾಲಕರು ಚಾಲನೆ ಮಾಡುವ ವಾಹನದ ನೋಂದಣಿ ಸಂಖ್ಯೆ ವಿವರಗಳನ್ನು ಪೋರ್ಟಲ್‌ನಲ್ಲಿ ನಮೂದಿಸಬೇಕು.
6. ಆಟೋ ರಿಕ್ಷಾ/ಟ್ಯಾಕ್ಸಿ ಚಾಲಕರು ತಮ್ಮ ದೈನಂದಿನ ಉದ್ಯೋಗ ನಡೆಸಲಾಗದೇ ಆದಾಯ ಗಳಿಸಲಾಗದೆ ಆದಾಯ ಕಳೆದುಕೊಂಡ ಬಗ್ಗೆ ಪೋರ್ಟಲ್‌ನಲ್ಲಿ ಸ್ವಯಂ ಘೋಷಣಾ ಪತ್ರವನ್ನು ನಮೂದಿಸಬೇಕು.
7. ಆಟೋರಿಕ್ಷಾ/ಟ್ಯಾಕ್ಸಿ ಚಾಲಕರು ಹಾಗೂ ಸ್ವಂತ ವಾಹನ ಚಲಾಯಿಸುವ ಮ್ಯಾಕ್ಸಿ ಕ್ಯಾಬ್ ಚಾಲಕರುಗಳಿಗಷ್ಟೇ ಈ ಯೋಜನೆ ಸೀಮಿತವಾಗಿದೆ.

ಮೇಲ್ಕಂಡ ಅರ್ಹತೆಗಳನ್ನು ಹೊಂದಿ ಸೇವಾ ಸಿಂಧೂ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಿದ ಅರ್ಹ ಫಲಾನುಭವಿಗಳಿಗೆ ಆಧಾರ್ ಸಂಖ್ಯೆಗೆ ಲಿಂಕ್ ಆಗಿರುವ ಬ್ಯಾಂಕ್ ಖಾತೆಗೆ ನೇರವಾಗಿ ಹಣ ವರ್ಗಾವಣೆ ಮಾಡಲಾಗುವುದು.

ಆಯುಕ್ತರು, 09/05
ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇಲಾಖೆ,
ಕರ್ನಾಟಕ ಸರ್ಕಾರ,
ಬೆಂಗಳೂರು.

ದಿನಾಂಕ: 09.05.2020